58

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ತಳವಾರ ಸಾಬಣ್ಣಾ ಇವರು ನಿಯಮ-330 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಉತ್ತರ:**

**ವಿಷಯ:** ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆಗಳ ಅಧ್ಯಕ್ಷರ ಅವಧಿ ಮುಗಿದರು ಹೊಸದಾಗಿ ಅಧ್ಯಕ್ಷರುಗಳನ್ನು ಆಯ್ಕೆ ಮಾಡದಿರುವುದು ಮತ್ತು ವರದಿ ಏರಿಯಾ ಸಭೆಗಳನ್ನು ನಡೆಸದೆಯಿರುವ ಕುರಿತು.

********

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಸ್ಥಾನಕ್ಕೆ ಮೀಸಲಾತಿ ನಿಗಧಿಪಡಿಸುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ನ್ಯಾಯಾಲಯ ಪ್ರಕರಣಗಳು ಬಾಕಿ ಇರುತ್ತವೆ;-

1) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರಲ್ಲಿ ದಿನಾಂಕ:15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ:17.12.2021ರಂದು ನೀಡಿರುವ ಆದೇಶದನ್ವಯ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ನಿವೃತ್ತ ನ್ಯಾಯಾಧೀಶರಾದ ಡಾ|| ಜಸ್ಟೀಸ್ ಕೆ.ಭಕ್ತವತ್ಸಲ ರವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿರುತ್ತದೆ. ಪ್ರಸ್ತುತ ಆಯೋಗವು ಅಂತಿಮ ವರದಿಯನ್ನು ನೀಡಿದ್ದು, ಈ ವರದಿಯನ್ನು ದಿನಾಂಕ:05.10.2023ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ನಿರ್ವಹಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಗೆ ಹಸ್ತಾಂತರಿಸಲು ಅನುಮೋದನೆ ನೀಡಿರುತ್ತದೆ ಆದ್ದರಿಂದ ನಗರಾಭಿವೃದ್ಧಿ ಇಲಾಖೆಯಿಂದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ಸಿಬ್ಬಂದಿ ಮತ್ತು ಆಡಳಿತ ಇಲಾಖೆಗೆ ಹಸ್ತಾಂತರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

2) ರಾಜ್ಯದಲ್ಲಿನ ಕೆಲವು ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿದ್ದು, ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್‌ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡವಿಟ್ ದಾಖಲಿಸಲಾಗಿದೆ. ಪ್ರಕರಣವು ದಿನಾಂಕ:13.12.2023 ರಂದು ವಿಚಾರಣೆಗೆ ಬರಲಿದೆ.

ಅಧ್ಯಕ/ಉಪಾಧ್ಯಕ್ಷ ಸ್ಥಾನದ ಅವಧಿ ಮುಕ್ತಾಯಗೊಂಡಿರುವ ನಗರ ಸ್ಥಳೀಯ ಸಂಸ್ಥೆಗಳ ಆಡಳಿತ ಹಿತದೃಷ್ಟಿಯಿಂದ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಪು ಬಂದ ನಂತರ ಸರ್ಕಾರದಿಂದ ಈ ಬಗ್ಗೆ ಸೂಕ್ತ ಕ್ರಮವಹಿಸಲಾಗುವುದು.

ಕರ್ನಾಟಕ ಪೌರಸಭೆಗಳ ಅಧಿನಿಯಮ 1964ಕ್ಕೆ ತಿದ್ದುಪಡಿ ತಂದು ಪ್ರಕರಣ 80 A ನ್ನು ಹೊಸದಾಗಿ ಸೇರ್ಪಡೆ ಮಾಡಲಾಗಿದ್ದು ಏರಿಯಾ ಸಭೆಗಳ ರಚನೆ, ಪ್ರಕಾರ್ಯಗಳನ್ನು ವಿವರಿಸಲಾಗಿರುತ್ತದೆ. ಅದರಂತೆ, ಸ್ಥಳೀಯ ಸಂಸ್ಥೆಗಳಿಗೆ ಈಗಾಗಲೇ ವಾರ್ಡ್ ಸಮಿತಿಗಳನ್ನು ರಚಿಸಲು ಅಗತ್ಯ ಕ್ರಮವಹಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

**ಸಂಖ್ಯೆ:ನಅಇ 31 ಎಲ್‌ಸಿಕ್ಯೂ 2023**

**(ರಹೀಂ ಖಾನ್)**
**ಪೌರಾಡಳಿತ ಮತ್ತು ಹಜ್ ಸಚಿವರು**

ರಹೀಂ ಖಾನ್
ಪೌರಾಡಳಿತ ಮತ್ತು ಹಜ್ ಸಚಿವರು